ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಲಾಕ್‌ಡೌನ್ ಸಮಯದಲ್ಲಿ ಕಾರ್ಮಿಕ ವರ್ಗದವರಿಗೆ ನೀಡಿದ ಕಿಟ್‌ಗಳ ಕುರಿತು

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

634(615) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೊರೋನಾದಿಂದ ಲಾಕ್‌ಡೌನ್ ಘೋಷಣೆಯಾದ ಸಂದರ್ಭದಲ್ಲಿ ಸಂಕಷ್ಟಕ್ಕೆ ಸಿಲುಕಿದ್ದ ಕಾರ್ಮಿಕ ವರ್ಗದವರಿಗೆ ನೆರವಾಗಲು ಮೂಲಭೂತ ಸಲಕರಣೆಗಳನ್ನೊಳಗೊಂಡ ಕಿಟ್‌ಗಳನ್ನು ಪೂರೈಸುವ ಯೋಜನೆಯನ್ವಯ ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಕಿಟ್‌ಗಳನ್ನು ಪೂರೈಸಲಾಗಿದೆ;

(ಆ) ಸದರಿ ಕಿಟ್‌ಗಳನ್ನು ನೀಡುವಾಗ ನಿಗದಿಪಡಿಸಿದ ಮಾನದಂಡಗಳು ಹಾಗೂ ಅರ್ಹತೆಗಳೇನು;

(ಇ) ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನಲ್ಲಿ, ಖಾಸಗಿ ವ್ಯಕ್ತಿಗಳ ಮನೆಗಳಲ್ಲಿ ಸರ್ಕಾರದ ಯೋಜನೆಯ ಫುಡ್‌ಕಿಟ್‌ಗಳನ್ನು ಸಂಗ್ರಹಿಸಿಟ್ಟು, ಕಾರ್ಮಿಕರಲ್ಲದವರಿಗೆ ಕಿಟ್ ವಿತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು; ಕ್ರಮ ಕೈಗೊಳ್ಳದಿದ್ದಲ್ಲಿ, ಇದಕ್ಕೆ ಕಾರಣವೇನು; ಹಾಗೂ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು?